ಸಾಮಾನ್ಯವಾಗಿ ಎಲ್ಲ ಜಿಲ್ಲಾಮಟ್ಟ ತಾಲ್ಲೂಕುಗಳಲ್ಲೂ ಅಧಿಕವಾಗಿದ್ದು, ಅನುದಾನದ ಲಭ್ಯತೆ ಮೇಲೆ ರೈತರಿಗೆ ಅನುದಾನ ನೀಡಲಾಗುತ್ತದೆ.

ಆ) ಹೌದು, ಲಭ್ಯತೆಯನ್ನು ಆಧರಿಸಿ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದೆ.

ಇ) ರೋಣದಲ್ಲಿರುವ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಛೇರಿಯನ್ನು ಮೇಲ್ದರ್ಜೆಗೇರಿಸುವ ಚಿಂತನೆ ಸರ್ಕಾರದ ಮುಂದಿರುವುದಿಲ್ಲ.

ಬೀದರ್ ವಿಧಾನಸಭಾ ಕ್ಷೇತ್ರದಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳು

1875(1199); ಡಾ॥ ಗುರುಪಾದಪ್ಪ ನಾಗಮಾರಪಳ್ಳಿ (ಬೀದರ್)

ಅ) ಬೀದರ್ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಪೌರಾಡಳಿತ ಇಲಾಖೆ ವತಿಯಿಂದ ಜಾರಿಗೊಳಿಸಲಾಗುತ್ತಿರುವ ಅಭಿವೃದ್ಧಿ ಕಾರ್ಯಗಳ ವಿವರಗಳೇನು;

ಆ) ಕಳೆದ ಎರಡು ವರ್ಷಗಳ ಅವಧಿಯಲ್ಲಿ ವಿವಿಧ ಯೋಜನೆಗಳಡಿಯಲ್ಲಿ ಇದಕ್ಕಾಗಿ ಬಿಡುಗಡೆಯಾದ ಮತ್ತು ವೆಚ್ಚವಾದ ಹಣವೆಷ್ಟು; ಈ ಕ್ಷೇತ್ರದಲ್ಲಿ ಇಲ್ಲಿಯವರೆವಿಗೆ ಪ್ರತಿ ಕಾಮಗಾರಿಗೆ ವೆಚ್ಚ ಮಾಡಲಾದ ಹಣವೆಷ್ಟು; ಎಷ್ಟು ಕಾಮಗಾರಿಗಳು ಪೂರ್ಣಗೊಂಡಿವೆ; ಮತ್ತು ಎಷ್ಟು ಕಾಮಗಾರಿಗಳು ಅಪೂರ್ಣವಾಗಿವೆ; (ಪ್ರತಿ ಕಾಮಗಾರಿಗಳ ಬಗ್ಗೆ ಸಂಪೂರ್ಣ ವಿವರಗಳನ್ನು ಒದಗಿಸುವುದು);

ಇ) ಬಹುತೇಕ ಕಾಮಗಾರಿಗಳು ಮಂದಗತಿಯಲ್ಲಿ ಸಾಗುತ್ತಿರುವುದಕ್ಕೆ ಕಾರಣಗಳೇನು; ಕಾಮಗಾರಿಗಳನ್ನು ಶೀಘ್ರಗತಿಯಲ್ಲಿ ಪೂರ್ಣಗೊಳಿಸಲು ಸರ್ಕಾರದ ಮುಂದಿನ ಕ್ರಮಗಳೇನು?

ಶ್ರೀ ಖಮರುಲ್ ಇಸ್ಲಾಂ (ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು)

ಅ) ಬೀದರ್ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಪೌರಾಡಳಿತ ಇಲಾಖೆಯ ವತಿಯಿಂದ ಜಾರಿಗೊಳಿಸಲಾಗುತ್ತಿರುವ ಅಭಿವೃದ್ಧಿ ಕಾರ್ಯಗಳ ವಿವರವನ್ನು ಅನುಬಂಧ–1 ರಲ್ಲಿ ನೀಡಿದೆ.

ಆ) ಕಳೆದ ಎರಡು ವರ್ಷಗಳ ಅವಧಿಯಲ್ಲಿ ವಿವಿಧ ಯೋಜನೆಗಳಡಿಯಲ್ಲಿ ಇದಕ್ಕಾಗಿ ಬಿಡುಗಡೆಯಾದ ಮತ್ತು ವೆಚ್ಚವಾದ ಹಣದ ವಿವರಗಳನ್ನು ಅನುಬಂಧ–2 ರಲ್ಲಿ ನೀಡಿದೆ.

ಇ) ಬೀದರ್ ನಗರ ಸಭೆಯಲ್ಲಿ ಬಹುತೇಕ ಕಾಮಗಾರಿಗಳು ಪೂರ್ಣಗೊಂಡಿದ್ದು ಬಾಕಿ ಉಳಿದಿರುವ ಕಾಮಗಾರಿ ಮುಗಿಯುವ ಹಂತದಲ್ಲಿದ್ದು, ಅವುಗಳನ್ನು ಶೀಘ್ರವಾಗಿ ಪೂರ್ಣಗೊಳಿಸಲಾಗುವುದು. ವಿವರಗಳನ್ನು ಅನುಬಂಧ–2 ರಲ್ಲಿ ನೀಡಿದೆ.

ಕೃಷಿ ಇಲಾಖೆಯ ಯೋಜನೆಗಳು

1876(1200); ಡಾ॥ ಗುರುಪಾದಪ್ಪ ನಾಗಮಾರಪಳ್ಳಿ (ಬೀದರ್)

ಅ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ರಾಜ್ಯ ಸರ್ಕಾರ ಪ್ರತಿ ವರ್ಷದ ಬಜೆಟ್‌ನಲ್ಲಿ ಕೃಷಿ ಇಲಾಖೆಗೆ ಒದಗಿಸಿರುವ ಹಣವೆಷ್ಟು; ಇದೇ ಅವಧಿಯಲ್ಲಿ ಕೇಂದ್ರ ಸರ್ಕಾರದಿಂದ ಕೃಷಿ ಇಲಾಖೆಗೆ ಬಂದಿರುವ ಹಣವೆಷ್ಟು;

ಆ) ಈ ಎರಡು ಅನುದಾನದಿಂದ ಕೃಷಿ ಇಲಾಖೆಯಲ್ಲಿ ಅನುಷ್ಠಾನಗೊಳಿಸಿರುವ ಯೋಜನೆಗಳು ಯಾವುವು; ಇದೇ ಅವಧಿಯಲ್ಲಿ ಇಲಾಖೆಯಲ್ಲಿ ಕೈಗೊಂಡಿರುವ ಅಭಿವೃದ್ಧಿ ಕಾರ್ಯಗಳು ಯಾವುವು;